## ದಿನಾಂಕ: 19/01/2021 ರ ನೋಡಲ್ ಅಧಿಕಾರಿ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಂಖ್ಯೆ-140 ಚಾಮರಾಜಪೇಟೆ ವಾರ್ಡಿನ ವಾರ್ಡ್ ಸಮಿತಿ ಸಭೆಯ ನಡವಳಿಗಳು

ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳ ಮತ್ತು ಸದಸ್ಯರುಗಳ ವಿವರಗಳು:

| ಕ್ರ ಸಂ. | ಅಧಿಕಾರಿ/ ನೌಕರರ ಹೆಸರು | ಪದನಾಮ |
|---|---|---|
| 1 | ಶ್ರೀಮತಿ. ಶಶಿಕಲಾ. ಎನ್ | ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿ |
| 2 | ಶ್ರೀ. ಎಂ.ಎಸ್. ಉಮೇಶ್ | ಸಂಚಾಲಕರು ಮತ್ತು ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ-140 |
| 3 | ಶ್ರೀ. ಅಶೋಕ್. ಜಿ | ಹಿರಿಯ ಆರೋಗ್ಯ ಪರಿವೀಕ್ಷಕರು. ವಾರ್ಡ್ ಸಂಖ್ಯೆ-140 |
| 4 | ಶ್ರೀ. ನವೀನ್ | ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ಸಂಖ್ಯೆ-140 |
| 5 | ಶ್ರೀ. ಚೇತನ್ ಕುಮಾರ್.ಕೆ.ವಿ | ಸಹಾಯಕ ಅಭಿಯಂತರರು (ಬೆಸ್ಕಾಂ) |
| 6 | ಶ್ರೀ. ಎಸ್. ರಮೇಶ್ | ಎ.ಎಸ್.ಐ ಚಾಮರಾಜಪೇಟೆ |
| 7 | ಶ್ರೀ. ನಟರಾಜು | ಸ್ಥಳೀಯ ನಾಗರೀಕರು |
| 8 | ಶ್ರೀ. ಲೋಕನಾಥ್ | ಸ್ಥಳೀಯ ನಾಗರೀಕರು |

ವಾರ್ಡ್ ಸಮಿತಿಯ ಉದ್ದೇಶ ಮತ್ತು ಸಭೆಯ ಮಹತ್ವವನ್ನು ತಿಳಿಸಿ ಸಭೆಯಲ್ಲಿ ಉಪಸ್ಥಿತರಿದ್ದ ಅಧ್ಯಕ್ಷರು, ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ಪ್ರಾರಂಭಿಸಲಾಯಿತು.

1. ಹಿಂದಿನ ಸಭೆಯ ನಡವಳಿಗಳಲ್ಲಿದ್ದ ವಿಷಯಕ್ಕೆ ತೆಗೆದುಕೊಂಡ ಕ್ರಮದ ಬಗ್ಗೆ ಓದಿ ರೆಕಾರ್ಡ್ ಮಾಡಲಾಯಿತು. ದಾಖಲಿಸಲಾದ ವಿಷಯಗಳಲ್ಲಿ ಬಾಕಿ ಉಳಿದಿರುವ ಕೆಲಸ ಕಾರ್ಯಗಳನ್ನು ಜರೂರಾಗಿ ಕ್ರಮವಹಿಸುವಂತೆ ಸಂಬಂಧಿಸಿದವರಿಗೆ ಸೂಚಿಸಲಾಯಿತು.

2. ಇಂದಿನ ಸಭೆಯಲ್ಲಿ ಮಾನ್ಯ ಅಧ್ಯಕ್ಷರು ಚರ್ಚಿಸಿದ ವಿಷಯಗಳು:

| ಕ್ರ ಸಂ | ವಿಷಯಗಳು | ನಿರ್ಣಯ | ಕ್ರಮ ತೆಗೆದುಕೊಳ್ಳಬೇಕಾದ ಅಧಿಕಾರಿ |
|---|---|---|---|
| 1 | ಚಾಮರಾಜಪೇಟೆ ವ್ಯಾಪ್ತಿಯ ಹಿಂದೂ ರುದ್ರಭೂಮಿಯಲ್ಲಿ ನೀರಿನ ಸಮಸ್ಯೆ ಉಂಟಾಗಿರುವ ಬಗ್ಗೆ | ಈ ಬಗ್ಗೆ ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳುವುದಾಗಿ ಸಭೆಯಲ್ಲಿ ತಿಳಿಸಲಾಯಿತು. | ಸಹಾಯಕ ಕಾರ್ಯಪಾಲಕ ಅಭಿಯಂತರರು ಚಾಮರಾಜಪೇಟೆ ಉಪವಿಭಾಗ. ಸಹಾಯಕ ಅಭಿಯಂತರರು ವಾರ್ಡ್:140 |
| 2 | ಬೀದಿಬದಿ ವ್ಯಾಪಾರಿಗಳಿಂದ ಚಾಮರಾಜಪೇಟೆ ಮುಖ್ಯರಸ್ತೆಯಲ್ಲಿ ವಾಹನ ದಟ್ಟಣೆ ಹಾಗೂ ರಸ್ತೆ ಅಪಘಾತ ಸಂಬಂಧಿಸುತ್ತಿರುವ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು. | ಈ ಬಗ್ಗೆ ಚಾಮರಾಜಪೇಟೆ ಬೀದಿಬದಿ ವ್ಯಾಪಾರಿಗಳನ್ನು ತೆರವುಗೊಳಿಸಲು ಪೋಲಿಸ್ ಇಲಾಖೆಯ ಕಾನೂನು ಮತ್ತು ಸುವ್ಯವಸ್ಥೆ ಹಾಗೂ ಸಂಚಾರ ವಿಭಾಗದವರಿಗೆ ಪತ್ರ ಮುಖೇನ ತಿಳಿಸಲು ಸಭೆಯಲ್ಲಿ ನಿರ್ಧರಿಸಲಾಯಿತು. | ಸಹಾಯಕ ಕಾರ್ಯಪಾಲಕ ಅಭಿಯಂತರರು ಚಾಮರಾಜಪೇಟೆ ಉಪವಿಭಾಗ. ಸಹಾಯಕ ಅಭಿಯಂತರರು ವಾರ್ಡ್:140 |
| 3 | ಚಾಮರಾಜಪೇಟೆ 5ನೇ ಮುಖ್ಯರಸ್ತೆಯಲ್ಲಿರುವ ಪಾಲಿಕೆ ಕಟ್ಟಡದಲ್ಲಿ ಬೆಂಗಳೂರು ಒನ್ ಸೆಂಟರ್ ಹಾಗೂ ಸಾರ್ವಜನಿಕ ಗ್ರಂಥಾಲಯ ಕಾರ್ಯನಿರ್ವಹಿಸದಿರುವ ಬಗ್ಗೆ. | ಈ ಬಗ್ಗೆ ಸಭೆಯಲ್ಲಿ ಚರ್ಚಿಸಿ ಪಾಲಿಕೆ ಕಟ್ಟಡವನ್ನು ಗುತ್ತಿಗೆಗೆ ಪಡೆದಿರುವ ಬೆಂಗಳೂರು ಒನ್ ಸೆಂಟರ್ ಹಾಗೂ ಸಾರ್ವಜನಿಕ ಗ್ರಂಥಾಲಯ ಮುಖ್ಯಸ್ಥರು ರವರಿಗೆ ಪತ್ರ ಮುಖೇನ ಕಾರ್ಯಚರಣೆ ಮಾಡಲು ಸೂಚಿಸಲು ಸಭೆಯಲ್ಲಿ ತಿಳಿಸಲಾಯಿತು. | ಸಹಾಯಕ ಕಾರ್ಯಪಾಲಕ ಅಭಿಯಂತರರು ಚಾಮರಾಜಪೇಟೆ ಉಪವಿಭಾಗ. ಸಹಾಯಕ ಅಭಿಯಂತರರು ವಾರ್ಡ್:140 |

...ಪ.ತಿ.ನೋ

| | | | |
|---|---|---|---|
| 4 | ಮತದಾರರ ಪಟ್ಟಿಯಲ್ಲಿ ಹೊಸದಾಗಿ ಹೆಸರುಗಳನ್ನು ನೊಂದಾಯಿಸುವ ಬಗ್ಗೆ | ಈ ಬಗ್ಗೆ ಕಂದಾಯ ಅಧಿಕಾರಿಗಳಿಗೆ ಮತದಾರರ ಚೀಟಿಯಲ್ಲಿ ಹೊಸದಾಗಿ ಹೆಸರುಗಳನ್ನು ನೊಂದಾಯಿಸುವ ಸಾರ್ವಜನಿಕರಿಗೆ ಅರಿವು ಮೂಡಿಸಲು ಅಗತ್ಯ ಕ್ರಮವಹಿಸುವಂತೆ ಸಭೆಯಲ್ಲಿ ತಿಳಿಸಲಾಯಿತು. | ಸಹಾಯಕ ಕಂದಾಯ ಅಧಿಕಾರಿ ಚಾಮರಾಜಪೇಟೆ ಉಪವಿಭಾಗ, ಕಂದಾಯ ಪರಿವೀಕ್ಷಕರು |
| 5 | ಚಾಮರಾಜಪೇಟೆ 8ನೇ ಅಡ್ಡರಸ್ತೆ ಹಾಗೂ 4ನೇ ಅಡ್ಡರಸ್ತೆಯಲ್ಲಿ Road Hump ಗಳಿಗೆ Reflective white Marking ಮಾಡುವ ಬಗ್ಗೆ | ಈ ಬಗ್ಗೆ ಪ್ರಸ್ತಾಪಿತ ಕಾಮಗಾರಿ ಪೂರ್ಣಗೊಂಡಿದ್ದು ವಾರ್ಡ್ ವ್ಯಾಪ್ತಿಯಲ್ಲಿ ಬೇರೆ ಬೇರೆ ಜಾಗಗಳನ್ನು ಗುರ್ತಿಸಿ Reflective white Marking ಮಾಡಲಾಗುವುದು ಎಂದು ಸಭೆಯಲ್ಲಿ ತಿಳಿಸಲಾಯಿತು. | ಸಹಾಯಕ ಕಾರ್ಯಪಾಲಕ ಅಭಿಯಂತರರು ಚಾಮರಾಜಪೇಟೆ ಉಪವಿಭಾಗ, ಸಹಾಯಕ ಅಭಿಯಂತರರು ವಾರ್ಡ್-140 |

ಮೇಲ್ಕಂಡ ಎಲ್ಲಾ ವಿಷಯಗಳೊಂದಿಗೆ ಕಾರ್ಯದರ್ಶಿಗಳು ಸಭೆಯನ್ನು ವಂದನಾರ್ಪಣೆಯೊಂದಿಗೆ ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿ ಮತ್ತು
ಸಹಾಯಕ ಅಭಿಯಂತರರು

ಅಧ್ಯಕ್ಷರು &
ನೋಡಲ್ ಅಧಿಕಾರಿ

ಪ್ರತಿಯನ್ನು:-

1. ಮಾನ್ಯ ಆಡಳಿತಾಧಿಕಾರಿ, ಬಿಬಿಎಂಪಿ ರವರ ಅವಗಾಹನೆಗೆ ಸಲ್ಲಿಸಿದೆ.
2. ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗೆ ಸಲ್ಲಿಸಿದೆ.
3. ಮಾನ್ಯ ಜಂಟಿ ಆಯುಕ್ತರು (ಪಶ್ಚಿಮ) ಬಿಬಿಎಂಪಿ ರವರ ಅವಗಾಹನೆಗೆ ಸಲ್ಲಿಸಿದೆ.
4. ಮಾನ್ಯ ಮುಖ್ಯ ಅಭಿಯಂತರರು (ಪಶ್ಚಿಮ) ಬಿಬಿಎಂಪಿ ರವರ ಅವಗಾಹನೆಗೆ ಸಲ್ಲಿಸಿದೆ
5. ನೋಡಲ್ ಅಧಿಕಾರಿ, ವಾರ್ಡ್ ಸಂಖ್ಯೆ: 140 ಚಾಮರಾಜಪೇಟೆ ರವರ ಅವಗಾಹನೆಗೆ ಸಲ್ಲಿಸಿದೆ.
6. ಕಾರ್ಯಪಾಲಕ ಅಭಿಯಂತರರು, ಚಾಮರಾಜಪೇಟೆ ವಿಭಾಗ ರವರ ಅವಗಾಹನೆಗೆ ಸಲ್ಲಿಸಿದೆ.
7. ಕಾರ್ಯಪಾಲಕ ಅಭಿಯಂತರರು (ವಿದ್ಯುತ್) ಪಶ್ಚಿಮ ವಿಭಾಗ, ಬಿಬಿಎಂಪಿ ರವರ ಅವಗಾಹನೆಗೆ ಮತ್ತು ಮುಂದಿನ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
8. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು & ಸಹಾಯಕ ಅಭಿಯಂತರರು (BWSSB) ಚಾಮರಾಜಪೇಟೆ ವಿಭಾಗ ರವರ ಅವಗಾಹನೆಗೆ ಮತ್ತು ಮುಂದಿನ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
9. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು & ಸಹಾಯಕ ಅಭಿಯಂತರರು (BESCOM) ಚಾಮರಾಜಪೇಟೆ ವಿಭಾಗ ರವರ ಅವಗಾಹನೆಗೆ ಮತ್ತು ಮುಂದಿನ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿ.
10. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಬೃಹತ್ ನೀರುಗಾಲುವೆ (SWD) ಪಶ್ಚಿಮ ವಲಯ ರವರ ಅವಗಾಹನೆಗೆ ಮತ್ತು ಮುಂದಿನ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
11. ಆರೋಗ್ಯ ವೈದ್ಯಾಧಿಕಾರಿ, ಚಾಮರಾಜಪೇಟೆ ವಲಯ ರವರ ಅವಗಾಹನೆಗೆ ಮತ್ತು ಮುಂದಿನ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
12. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಘನತ್ಯಾಜ್ಯ ನಿರ್ವಹಣೆ) ಚಾಮರಾಜಪೇಟೆ ವಿಭಾಗ ರವರ ಮುಂದಿನ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
13. ಸಹ ಕಂದಾಯ ಅಧಿಕಾರಿ, ಚಾಮರಾಜಪೇಟೆ ಉಪವಿಭಾಗ ರವರ ಮುಂದಿನ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
14. ಪೊಲೀಸ್ ಇನ್ಸ್‌ಪೆಕ್ಟರ್, ಕಾನೂನು ಮತ್ತು ಸುವ್ಯವಸ್ಥೆ, ಚಾಮರಾಜಪೇಟೆ [illegible] ರವರ ಮತ್ತು ಮುಂದಿನ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
15. ಆರಕ್ಷಕ ನಿರೀಕ್ಷಕರು, [illegible] ಚಾಮರಾಜಪೇಟೆ [illegible] ರವರ ಮತ್ತು ಮುಂದಿನ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
16. ವಾರ್ಡ್ ಸಂಖ್ಯೆ 140 ಚಾಮರಾಜಪೇಟೆ ವಾರ್ಡ್ ಸಮಿತಿ ಸದಸ್ಯರ ಮಾಹಿತಿಗಾಗಿ ಸಲ್ಲಿಸಿದೆ.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
Bruhat Bengaluru Mahanagara Palike

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಛೇರಿ, ಚಾಮರಾಜಪೇಟೆ ಉಪವಿಭಾಗ,
2ನೇ ಮುಖ್ಯರಸ್ತೆ, ನಂಜಾಂಬ ಅಗ್ರಹಾರ, ಟಿ.ಆರ್.ಮಿಲ್ ರಸ್ತೆ, ಚಾಮರಾಜಪೇಟೆ, ಬೆಂಗಳೂರು-560018

ಸಂಖ್ಯೆ: ಸ.ಕಾ.ಅ/ಚಾ.ಪೇ/ಪಿಆರ್/ /20-21 ದಿನಾಂಕ:

ಇವರಿಗೆ,
1.ಪೊಲೀಸ್ ಇನ್ಸ್‌ಪೆಕ್ಟರ್
ಕೆಂಪೇಗೌಡನಗರ ಪೊಲೀಸ್ ಠಾಣೆ,
ಗವೀಪುರಂ ಗುಟ್ಟಹಳ್ಳಿ
ಬೆಂಗಳೂರು-19.

2.ಪೊಲೀಸ್ ಇನ್ಸ್‌ಪೆಕ್ಟರ್
ಸಂಚಾರಿ ವಿಭಾಗ, ಸೆಂಟ್ರಲ್ ಪೊಲೀಸ್ ಠಾಣೆ,
ಚಾಮರಾಜಪೇಟೆ,
ಬೆಂಗಳೂರು-18

ಮಾನ್ಯರೇ,

ವಿಷಯ:- ವಾರ್ಡ್ ಸಂಖ್ಯೆ 140 ಚಾಮರಾಜಪೇಟೆ ವ್ಯಾಪ್ತಿಯ 5ನೇ ಮುಖ್ಯರಸ್ತೆಯಲ್ಲಿ ಅನಧೀಕೃತವಾಗಿ ಬೀದಿಬದಿ ವ್ಯಾಪಾರಿಗಳನ್ನು ತೆರವುಗೊಳಿಸುವ ಬಗ್ಗೆ.

~~~***~~~

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ವಾರ್ಡ್ ಸಂಖ್ಯೆ 140 ಚಾಮರಾಜಪೇಟೆ ವ್ಯಾಪ್ತಿಯ 5ನೇ ಮುಖ್ಯರಸ್ತೆಯು ವಾರ್ಡಿನ ಪ್ರಮುಖ ರಸ್ತೆಯಾಗಿದ್ದು ಈ ರಸ್ತೆಯು ನಗರದ ಹಲವು ಬಡಾವಣೆಗೆ ಹೋಗಲು ಸಾರ್ವಜನಿಕರು ಈ ರಸ್ತೆಯನ್ನು ಉಪಯೋಗಿಸುತ್ತಿರುವುದರಿಂದ ಈ ರಸ್ತೆಯಲ್ಲಿ ಹೆಚ್ಚಾಗಿ ಜನಸಂದಣಿ ಹಾಗೂ ವಾಹನ ಸಂಚಾರ ಹೆಚ್ಚಾಗಿರುತ್ತದೆ. ಪ್ರಸ್ತುತ 5ನೇ ಮುಖ್ಯರಸೆಯಲ್ಲಿ ಅನಧೀಕೃತವಾಗಿ ಬೀದಿಬದಿ ವ್ಯಾಪಾರಿಗಳು ಪ್ರತಿದಿನ ಮುಂಜಾನೆಯಿಂದ ಸಂಜೆವರೆಗೂ ವ್ಯಾಪಾರ ಮಾಡುತ್ತಿರುವುದರಿಂದ ವಾಹನಗಳ ದಟ್ಟಣೆ ಮತ್ತು ಸಾರ್ವಜನಿಕರಿಗೆ ಅಪಘಾತಗಳು ಸಂಭವಿಸುತ್ತಿರುತ್ತವೆ. ಸದರಿ ವ್ಯಾಪಾರಸ್ಥರನ್ನು ತೆರವುಗೊಳಿಸುವಂತೆ ಕೋರಿ ಈ ಕಛೇರಿಗೆ ಹಲವಾರು ದೂರುಗಳು ದಾಖಲಾಗಿರುತ್ತದೆ.

ಈ ಹಿನ್ನಲೆಯಲ್ಲಿ 5ನೇ ಮುಖ್ಯರಸೆಯಲ್ಲಿ ಅನಧೀಕೃತವಾಗಿ ಬೀದಿಬದಿ ವ್ಯಾಪಾರ ಮಾಡುತ್ತಿರುವ ವ್ಯಾಪಾರಸ್ಥರನ್ನು ತೆರವುಗೊಳಿಸಲು ತಮ್ಮ ಇಲಾಖಾ ಸಿಬ್ಬಂದಿಗಳೊಂದಿಗೆ ಹಾಗೂ ಪಾಲಿಕೆ ಸಿಬ್ಬಂಧಿಗಳು ಜಂಟಿಯಾಗಿ ಕಾರ್ಯಾಚರಣೆ ಮಾಡಲು ಅವಶ್ಯಕತೆ ಇರುತ್ತದೆ. ತಮ್ಮ ಇಲಾಖಾ ವತಿಯಿಂದ ಕಾರ್ಯಾಚರಣೆ ಹಮ್ಮಿಕೊಳ್ಳಲು ದಿನಾಂಕ ನಿಗಧಿಪಡಿಸಿ ತಿಳಿಸಲು ಈ ಮೂಲಕ ಕೋರಲಾಗಿದೆ. ಸದರಿ ದಿನಾಂಕದಂದು ಈ ಕಛೇರಿ ವತಿಯಿಂದ ಅಗತ್ಯ ಸಿಬ್ಬಂಧಿ ಮತ್ತು ಅಗತ್ಯ ಸಲಕರಣೆ ಹಾಗೂ ವಾಹನಗಳೊಂದಿಗೆ ಕಾರ್ಯಾಚರಣೆಯಲ್ಲಿ ಸಹಕರಿಸಲಾಗುವುದೆಂದು ಈ ಮೂಲಕ ತಿಳಿಸಲಾಗಿದೆ.

ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ

22/1/21
ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು
ಚಾಮರಾಜಪೇಟೆ ಉಪವಿಭಾಗ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
~~~